**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಹರೀಶ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ಗ್ರಾಪಂಕಾ 2017, ದಿನಾಂಕ:16.02.2017.
2. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1/DE/439/2017/ARE-10, Date:22.12.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/439/2017/ARE-10, Date:26.12.2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ ರವರ ಪತ್ರ ಸಂಖ್ಯೆ: UPLOK-1/DE/439/2017/ARE-10, Date:26.12.2017.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 44 ಗ್ರಾಪಂಕಾ 2017, ದಿನಾಂಕ:06.01.2018 ಮತ್ತು 22.02.2021.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದಲ್ಲಿ ಶ್ರೀ ಹರೀಶ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧದ ಈ ಕೆಳಕಂಡ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**ದೋಷಾರೋಪಣೆ"**

"The DGO Sri Harish, Panchayath Development Officer, Ramohalli Grama Panchayath, Kengeri Hobli, Bangalore South Taluk, Bangalore, has not furnished the copies of the documents inspite of directions issued by the Executive Officer to furnish the copies to the complainant who is the owner of property No.149/149/149, Ramadevara Temple, Siruated on the sothern side of the property of the complainant which is separated by a compound wall. But the trustees of the temple have encroached upon the property of the complainant. Therefore the complainant filed O.S. No. 575/2014 and the Court has ordered for maintaining status quo. Immediately after passing the status quo order, the trustees of the temple have applied for khata along with documents and the Gram Panchayath has issued notice to the neighburers. On, 16.12.2014 the complainant also applied for khata and copies of the documents produced by the trustees. But DGO has not furnished the said copies. Thus DGO being a Government/Public Servant has failed to maintain absolute integrity besides devotion to duty and acted in a manner unbecoming of a Government Servant

...2

and thus committed misconduct as enumerated under Rule 3(1) of KCS (Conduct) Rules 1966"

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಮೇಲ್ಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ, ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿರವರ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಸದರಿಯವರ ವಿರುದ್ಧದ ದುರ್ನಡತೆ ಆರೋಪವು ಸಾಬೀತಾಗಿರುವುದರಿಂದ ಇವರಿಗೆ **"to impose penalty of withholding two annual increments payble to DGO Sri Harish, Panchayath Development Officer with cumulative effect"** ಎಂದು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಶ್ರೀ ಹರೀಶ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರಿಗೆ ನಿಯಮಾನುಸಾರ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿರುತ್ತದೆ.

ರಾಮೋಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧ ಶ್ರೀ ನಂಜುಂಡ ಎಂಬುವರು ಲೋಕಾಯುಕ್ತ ದೂರು ನೀಡಿರುತ್ತಾರೆ. ರಾಮೋಹಳ್ಳಿ ಗ್ರಾಮದ ಸ.ನಂ.149/149/149 ರ ಆಸ್ತಿಯು ಶ್ರೀ ನಂಜುಂಡ ಎಂಬುವವರಿಗೆ ಸೇರಿದ್ದಾಗಿದ್ದು, ಈ ಆಸ್ತಿಯ ಪಕ್ಕದಲ್ಲಿರುವ ರಾಘವೇಂದ್ರ ದೇವಸ್ಥಾನದ ಟ್ರಸ್ಟಿಗಳು ಶ್ರೀ ನಂಜುಂಡ ಇವರಿಗೆ ಸೇರಿದ ಜಮೀನನ್ನು ಅಕ್ರಮಗೊಳಿಸಿರುತ್ತಾರೆಂದು ಸದರಿಯವರು ದೂರು ನೀಡಿ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಮಾನ್ಯ ನ್ಯಾಯಾಲಯವು ಯಥಾಸ್ಥಿತಿಯನ್ನು ಕಾಪಾಡಲು ಆದೇಶಿಸಿದೆ. ಈ ಮಧ್ಯೆ ಸದರಿಯವರು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿರವರಿಂದ ಕೆಲವೊಂದು ದಾಖಲೆಗಳನ್ನು ಕೋರಿದರೂ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು ಸದರಿ ದಾಖಲೆಗಳನ್ನು ನೀಡಿರುವುದಿಲ್ಲ. ಆದ್ದರಿಂದ ದೂರುದಾರರು ಲೋಕಾಯುಕ್ತರಿಗೆ ದೂರು ನೀಡಿರುತ್ತಾರೆ. ಲೋಕಾಯುಕ್ತರಿಂದ ಸದರಿ ನೌಕರರಿಗೆ ಪತ್ರ ಬರೆದರೂ ನೌಕರರು ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ನೌಕರನ ಮೇಲೆ ನಡೆಸಿದ ಲೋಕಾಯುಕ್ತ ವಿಚಾರಣೆಯಲ್ಲಿ ಈ ಆರೋಪವು ಸಾಬೀತಾಗಿರುತ್ತದೆ. ಇಲಾಖೆಯಿಂದ ನೀಡಲಾದ ಕಾರಣ ಕೇಳುವ ನೋಟೀಸಿಗೂ ನೌಕರರು ಯಾವುದೇ ಉತ್ತರ ನೀಡಿಲ್ಲ.

ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ರವರ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಹರೀಶ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರಿಗೆ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ" ದಂಡನೆ ವಿಧಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ಗ್ರಾಪಂಕಾ 2017</u>**
**<u>ಬೆಂಗಳೂರು, ದಿನಾಂಕ:11-02-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹರೀಶ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು,

...3

ಬೆಂಗಳೂರು ನಗರ ಜಿಲ್ಲೆ ರವರ ವಿರುದ್ಧದ ಕರ್ತವ್ಯ ಲೋಪದ ಆರೋಪಗಳು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8(iii) ರನ್ವಯ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
Chetna 11/2/22
(ಚೇತನ ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.(ಜಿ.ಪಂ.)
11/2/22

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
6. ಸಂಬಂಧಿಸಿದ ನೌಕರರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರ-ಮುಖಾಂತರ)
7. ಶ್ರೀ ಹರೀಶ್, ನಂ.42, ವರ್ಷವ್ ಲೇಔಟ್, 2ನೇ ಕ್ರಾಸ್, ಸಿ.ವಿ. ರಾಮನ್ ನಗರ, ಬೆಂಗಳೂರು-560093. (ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮೋಹಳ್ಳಿ ಗ್ರಾಮ ಪಂಚಾಯಿತಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.)
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

9611268379